# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

## ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 04.12.2021 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ಶ್ರೀ ಕಮಲಪ್ಪ | ಕಿರಿಯ ಆರೋಗ್ಯ ಪರಿವೀಕ್ಷಕರು-ವಾರ್ಡ್ 71 |
| 4 | ಶ್ರೀ ಗಂಗರೆಡ್ಡಿ | ಕಂದಾಯ ಪರಿವೀಕ್ಷಕರು |
| 5 | ಶ್ರೀ ಎನ್ ಜಗದೀಶ್ | ಬೆಸ್ಕಾಂ |
| 6 | ಶ್ರೀ ವಿಠ್ಠಲ್ ರಾವ್ | ಬೆಸ್ಕಾಂ |
| 7 | ಶ್ರೀ ಕೆ.ಎ ಉಮೇಶ್ | ಹೆಗ್ಗನಹಳ್ಳಿ ಹಿತ ರಕ್ಷಣಾ ವೇದಿಕೆ |
| 8 | ಶ್ರೀ ಲಿಂಗಪ್ಪ | ಹೆಗ್ಗನಹಳ್ಳಿ ಹಿತ ರಕ್ಷಣಾ ವೇದಿಕೆ |
| 9 | ಶ್ರೀ ಎಸ್.ಪ್ರವೀಣ್ | ಬೀದಿದೀಪಗಳ ನಿರ್ವಹಣೆಯ ಗುತ್ತಿಗೆದಾರರು |

:ನಡಾವಳಿಯ ವರದಿ:

- ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ವಿಷಯ ಸಂಖ್ಯೆ: 1:- ಹೆಗ್ಗನಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಗಜಾನನ ನಗರದ 2ನೇ ಮುಖ್ಯರಸ್ತೆಗೆ ದಿ|| ಪುನೀತ್ ರಾಜ್ ಕುಮಾರ್ ರಸ್ತೆ ಎಂದು ನಾಮಕರಣ ಮಾಡುವ ಬಗ್ಗೆ**

ವಾರ್ಡ್ ನಂ.71 ರ ಸಹಾಯಕ ಅಭಿಯಂತರರು ಮಾತನಾಡಿ, ಹೆಗ್ಗನಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಗಜಾನನ ನಗರದ 2ನೇ ಮುಖ್ಯರಸ್ತೆಗೆ ದಿ|| ಪುನೀತ್ ರಾಜ್ ಕುಮಾರ್ ರಸ್ತೆ ಎಂದು ನಾಮಕರಣ ಮಾಡುವಂತೆ ವಾರ್ಡ್ 71ರ ವ್ಯಾಪ್ತಿಯ ಯೋಗೀಶ್ ಶೆಟ್ಟಿ ರವರು ಮಾನ್ಯ ಆಯುಕ್ತರವರಿಗೆ ಪತ್ರ ಸಲ್ಲಿಸಿರುವುದನ್ನು ಸಭೆಯಲ್ಲಿ ಪ್ರಸ್ತಾಪಿಸಿದರು.

ಈ ಬಗ್ಗೆ ನೋಡಲ್ ಅಧಿಕಾರಿರವರು ಮಾತನಾಡಿ ಸಮುಚ್ಚಿತ ಮಾರ್ಗದಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ & ಅನುಮತಿಯನ್ನು ಪಡೆದುಕೊಳ್ಳುವಂತೆ ಸೂಚಿಸಿ, ಈ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸಹಾಯಕ ಅಭಿಯಂತರರಿಗೆ ಸೂಚಿಸಿದರು.

**ವಿಷಯ ಸಂಖ್ಯೆ: 2:- ರಸ್ತೆಗುಂಡಿಗಳ ಬಗ್ಗೆ**

ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 71ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿಮಾಡಿಕೊಂಡು, ಹಲವು ಕಡೆಗಳಲ್ಲಿ ವೆಟ್‌ಮಿಕ್‌ಅನ್ನು ಅಳವಡಿಸಲಾಗಿರುತ್ತದೆ. ಮಳೆಯು ಬಿಡುವು ಕೊಟ್ಟ ನಂತರ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

ಮುಂದುವರೆದು ನೋಡಲ್ ಅಧಿಕಾರಿ ರವರು ಮಾತನಾಡಿ, ಹೆಗ್ಗನಹಳ್ಳಿ ಮುಖ್ಯರಸ್ತೆಯಲ್ಲಿ ರಸ್ತೆಗುಂಡಿಗಳು ಹೆಚ್ಚಾಗಿದ್ದು, ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತುಂಬಾ ತೊಂದರೆಯಾಗಿರುತ್ತದೆ. ಈ ಬಗ್ಗೆ ದೂರುಗಳು ಬಂದಿದ್ದು, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ಹೆಗ್ಗನಹಳ್ಳಿ ಮುಖ್ಯರಸ್ತೆಯು ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಕಾರ್ಯವ್ಯಾಪ್ತಿಗೆ ಸೇರಿದ್ದು, ಸದರಿಯವರ ಗಮನಕ್ಕೆ ತಂದು ರಸ್ತೆಗುಂಡಿಗಳನ್ನು ಮುಚ್ಚಿಸಲು ತಿಳಿಸಲಾಗುವುದೆಂದು ಸಭೆಗೆ ತಿಳಿಸಿದರು.

- **ವಿಷಯ ಸಂಖ್ಯೆ: 3 :- ಸೊಲ್ಲಾಪುರದಮ್ಮ ದೇವಸ್ಥಾನದ ಹತ್ತಿರ ನೀರು ರಸ್ತೆಯ ಮೇಲೆ ಹರಿಯುತ್ತಿರುವ ಬಗ್ಗೆ**

ನೋಡಲ್ ಅಧಿಕಾರಿಗಳು ಮಾತನಾಡಿ, ಸೊಲ್ಲಾಪುರದಮ್ಮ ದೇವಸ್ಥಾನದ ಹತ್ತಿರ ನೀರು, ಮಳೆಯ ನೀರು ರಸ್ತೆಯ ಮೇಲೆ ಹರಿಯುತ್ತಿದ್ದು, ರಸ್ತೆಗುಂಡಿಗಳು ಹೆಚ್ಚಾಗಿದ್ದು ವಾಹನ ಸಂಚಾರಕ್ಕೆ ತುಂಬಾ ತೊಂದರೆಯಾಗಿರುವುದರ ಬಗ್ಗೆ ದೂರು ಬಂದಿರುವುದನ್ನು ಪ್ರಸ್ತಾಪಿಸಿದರು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ಸೊಲ್ಲಾಪುರದಮ್ಮ ದೇವಸ್ಥಾನದ ಹತ್ತಿರ ಸುಂಕದಕಟ್ಟೆ ಮುಖ್ಯರಸ್ತೆಯು ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಕಾರ್ಯವ್ಯಾಪ್ತಿಗೆ ಸೇರಿದ್ದು, ಸದರಿಯವರ ಗಮನಕ್ಕೆ ತಂದು ರಸ್ತೆಗುಂಡಿಗಳನ್ನು ಮುಚ್ಚಿಸಲು ಹಾಗೂ ರಸ್ತೆ ಬದಿಯ ಚರಂಡಿಗಳಲ್ಲಿ ಹೂಳನ್ನು ತೆಗೆಯುವ ಬಗ್ಗೆ ತಿಳಿಸಲಾಗುವುದೆಂದು ಸಭೆಗೆ ತಿಳಿಸಿದರು.

- **ವಿಷಯ ಸಂಖ್ಯೆ: 4 :- ವಾರ್ಡ್ 71ರ ವ್ಯಾಪ್ತಿಯ ಕೋವಿಡ್-19 ಟ್ರಯಾಜ್ ಸೆಂಟರ್‌ನ್ನು ಸ್ಥಳಾಂತರಿಸುವ ಬಗ್ಗೆ.**

ಸದಸ್ಯರಾದ ಲಿಂಗಪ್ಪನವರು ವ ಮಾತನಾಡಿ, ಈ ಹಿಂದೆ ವಾರ್ಡ್ 71ರ ವ್ಯಾಪ್ತಿಯಲ್ಲಿ ಟ್ರಯಾಜ್ ಸೆಂಟರ್ ಅನ್ನು ಹೆಗ್ಗನಹಳ್ಳಿಯ ಸರ್ಕಾರಿ ಶಾಲೆಯಲ್ಲಿ ತೆರೆಯಲಾಗಿತ್ತು. ಆದರೆ ಈಗ ಶಾಲೆಗಳು ಆರಂಭವಾಗಿರುವುದರಿಂದ ಟ್ರಯಾಜ್ ಸೆಂಟರನ್ನು ಬೇರೆ ಸ್ಥಳಕ್ಕೆ ಸ್ಥಳಾಂತರಿಸಬೇಕೆಂದು ಕೋರಿದರು.

ನೋಡಲ್ ಅಧಿಕಾರಿಗಳು ಮಾತನಾಡಿ, ಈ ಬಗ್ಗೆ ಸೂಕ್ತ ಸ್ಥಳವನ್ನು ಹುಡುಕಿ ಪ್ರಸ್ತಾವನೆ ಸಲ್ಲಿಸುವಂತೆ ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರಿಗೆ ಸೂಚಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ 71, ಹೆಗ್ಗನಹಳ್ಳಿ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ವಾರ್ಡ್ ಸಮಿತಿ ಅಧ್ಯಕ್ಷರು**
**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**
**ವಾರ್ಡ್ ನಂ.71, ಹೆಗ್ಗನಹಳ್ಳಿ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ